**ಸಿವಿಲ್ ಮತ್ತು ಜೆಎಮಎಫ್ ಸಿ ನ್ಯಾಯಾಧೀಶರ ನ್ಯಾಯಾಲಯ, ಯಾದಗಿರಿ.**

ಸಿಸಿ ನಂ.**2210/2024**

ಪಿರ್ಯಾದಿ : ಶ್ರೀಮತಿ ಮಂಜುಳಾ ಗಂಡ ಶಿವಕುಮಾರ ನಾಯಕ್,
ವಯಸ್ಸುಃ 36 ವರ್ಷ, ಉದ್ಯೋಗಃ ಗೃಹಿಣಿ,
ಸಾಃ ಅಜೀಝ್ ಕಾಲೋನಿ, ಯಾದಗಿರಿ,
ತಾಃ ಮತ್ತು ಜಿಃ ಯಾದಗಿರಿ.

ಆರೋಪಿ : ಶ್ರೀ ಹೆಚ್.ಬಿ. ಸೋಮಶೇಖರ ತಂದೆ ದೇವಪ್ಪ ತಳವಾರ,
ವಯಸ್ಸುಃ 42 ವರ್ಷ, ಉದೋಗಃ ದ್ವಿತೀಯ ದರ್ಜೆ ಸಹಾಯಕ,
ಸಾಃ ಕೃಷಿ ಸಹಾಯಕ ನಿರ್ದೇಶಕರವರ ಕಚೇರಿ, ಕೊಪ್ಪಳ.

**ದಂಡ ಪ್ರಕ್ರಿಯಾ ಸಂಹಿತೆ ಕಲಂ 313 ರ ಅಡಿಯಲ್ಲಿ ಅರೋಪಿತನ ಹೇಳಿಕ**

ಪ್ರಶ್ನೆಃ**1**ಃ ನೀವು ದೂರುದಾರರ ವಿಚಾರಣೆಯನ್ನು ಕೇಳಿದ್ದೀರಾ**?**

ಆರೋಪಿಯ ಉತ್ತರಃ

ಪ್ರಶ್ನೆ2 : ಫ್ರಾಸಾ-1 ಶ್ರೀಮತಿ ಮಂಜಳಾ ಗಂಡ ಶಿವಕುಮಾರ ನಾಯಕ್ ಇವರು ಪಿರ್ಯಾದಿದಾರರಾಗಿದ್ದು, ತಮ್ಮ ಮುಖ್ಯ ವಿಚಾರಣೆಯಲ್ಲಿ ಪಿರ್ಯಾದಿದಾರರು ಮತ್ತು ಆಪಾದಿತನಾದ ನೀವು ಪರಿಚಯಸ್ಥರಾಗಿರುತ್ತೀರಿ ಹಾಗೂ ಸದರಿ ಪರಿಚಯದ ಆಧಾರದ ಮೇಲೆ ನೀವು ದೂರುದಾರರಿಂದ ದಿನಾಂಕ 10.06.2023 ರಂದು ರೂ.3,00,000/- ಗಳನ್ನು ಸಾಲಪಡೆದಿರುತ್ತೀರಿ ಎಂದು ನುಡಿದಿದ್ದಾರೆ. ಇದರ ಬಗ್ಗೆ ನೀವೇನು ಹೇಳುವಿರಿ?

ಆರೋಪಿಯ ಉತ್ತರಃ

ಪ್ರಶ್ನೆಃ 3 ಃ ಫ್ರಾಸಾ 1 ಇವರು ತಮ್ಮ ಮುಖ್ಯ ವಿಚಾರಣೆಯಲ್ಲಿ ಮುಂದುವರೆದು, ಸದರಿ ಹಣವನ್ನು ಮರುಪಾವತಿ ಮಾಡುವಂತೆ ಒತ್ತಾಯಿಸಿದಾಗ ಆಪಾದಿತನಾದ ನೀವು ಖಾತೆ ಹೊಂದಿರುವ ಭಾರತೀಯ ಸ್ಟೇಟ್ ಬ್ಯಾಂಕ್, ಕೊಪ್ಪಳ ಶಾಖೆಗೆ ಸೇರಿದ 897265 ಸಂಖ್ಯೆಯ ಚೆಕ್ ನಲ್ಲಿ ರೂ. 3,00,000/- ಹಾಗೂ ದಿನಾಂಕ 10.07.2024 ಎಂದು ನಮೂದು ಮಾಡಿ ಬ್ಯಾಂಕಿಗೆ ಹಾಜರುಪಡಿಸಿ ನಗದೀಕರಿಸಿಕೊಳ್ಳುವಂತೆ ನೀಡಿದ್ದಿರಿ ಎಂದು ನುಡಿದಿದ್ದಾರೆ. ಇದರ ಬಗ್ಗೆ ನೀವೇನು ಹೇಳುವಿರಿ?

ಆರೋಪಿಯ ಉತ್ತರಃ

ಪ್ರಶ್ನೆ 4ಃ ಫ್ರಾಸಾ 1 ಇವರು ತಮ್ಮ ಮುಖ್ಯ ವಿಚಾರಣೆಯಲ್ಲಿ ಮುಂದುವರೆದು, ಸದರಿ ಚೆಕ್‌ನ್ನು ಪಿರ್ಯಾದುದಾರರು ನಗದೀರಣಕ್ಕಾಗಿ ತಾವು ಖಾತೆ ಹೊಂದಿರುವ ಬ್ಯಾಂಕ್ ಆಫ್ ಇಂಡಿಯಾ, ಅಲ್ಲಿಪುರ ಶಾಖೆಯ ಮೂಲಕ ಹಾಜರು ಪಡಿಸಿದಾಗ, "Funds Insuffi-

cient" ಎಂಬ ಹಿಂಬರಹದೊಂದಿಗೆ ಅಮಾನ್ಯಗೊಂಡು ಚೆಕ್ಕನ್ನು ದಿನಾಂಕ 26.09.2024 ರಂದು ವಾಪಸ್ಸು ನೀಡಿರುತ್ತಾರೆ ಎಂದು ನುಡಿದಿದ್ದಾರೆ. ಇದರ ಬಗ್ಗೆ ನೀವೇನು ಹೇಳುವಿರಿ?

ಆರೋಪಿಯ ಉತ್ತರಃ

ಪ್ರಶ್ನೆ 5ಃ ಫ್ರಾಸಾ 1 ಇವರು ತಮ್ಮ ಮುಖ್ಯ ವಿಚಾರಣೆಯಲ್ಲಿ ಮುಂದುವರೆದು, ನಂತರ ಪಿರ್ಯಾದುದಾರರು ತಮ್ಮ ವಕೀಲರ ಮೂಲಕ ದಿನಾಂಕ **22.10.2024** ರಂದು ಅಪಾದಿತನಾದ ನಿಮ್ಮ ವಿಳಾಸಕ್ಕೆ ನೊಂದಾಯಿತ ಅಂಚೆಯ ಮೂಲಕ ತಿಳುವಳಿಕೆ ಪತ್ರವನ್ನು ಕಳುಹಿಸಿದ್ದು, ಸದರಿ ನೋಟಿಸ್ ದಿನಾಂಕ 28.10.2024 ರಂದು ಜಾರಿಯಾಗಿರುತ್ತದೆ. ನಿಮ್ಮ ಖಾತೆಯಲ್ಲಿ ಸಾಕಷ್ಟು ಹಣ ಇಲ್ಲದಿದ್ದರು ದೂರುದಾರರಿಗೆ ಚೆಕ್‌ನ್ನು ನೀಡಿ ನಂತರ ಚೆಕ್ ಮೊತ್ತವನ್ನು ಪಾವತಿ ಮಾಡದೆ ಇರುವುದರ ಮೂಲಕ ವರ್ಗಾವಣೀಯ ಲಿಖಿತ ಕಾಯ್ದೆ ಕಲಂ 138 ರಡಿ ಅಪರಾಧ ಎಸಗಿದ್ದೀರಿ ಎಂದು ನುಡಿದಿದ್ದಾರೆ. ಇದರ ಬಗ್ಗೆ ನೀವೇನು ಹೇಳುವಿರಿ?

ಆರೋಪಿಯ ಉತ್ತರಃ |

ಪ್ರಶ್ನೆ **6**ಃ ಈ ಪ್ರಕರಣದ ಬಗ್ಗೆ ನೀವು ಏನಾದರೂ ಹೇಳಲು ಇಚ್ಚಿಸುತ್ತೀರಾ?

ಆರೋಪಿಯ ಉತ್ತರಃ

ಪ್ರಶ್ನೆ **7** ಃ ನಿಮ್ಮ ಪರ ಯಾವುದಾದರೂ ಸಾಕ್ಷಿಯನ್ನು ವಿಚಾರಣೆ ಮಾಡುತ್ತೀರಾ?

ಆರೋಪಿಯ ಉತ್ತರಃ

(ಮೇಲ್ಕಂಡಂತೆ ಆಪಾದಿತರಿಗೆ ತಿಳಿದ ಭಾಷ್ಷೆಯಲ್ಲಿ ತೆರೆದ ನ್ಯಾಯಾಲಯದಲ್ಲಿ ಓದಿ ಹೇಳಿ ಪ್ರಶ್ನಿಸಿ, ಅವರು ನೀಡಿದ ಹೇಳಿಕೆಯನ್ನು ಪಡೆದುಕೊಳ್ಳಲಾಯಿತು.)

ದಿನಾಂಕಃ 13.06.2025<br>ಸ್ಥಳಃ ಯಾದಗಿರಿ

ಸಿವಿಲ್ ಮತ್ತು ಜೆ ಎಂ ಎಫ ಸಿ<br>ನ್ಯಾಯಾಧೀಶರು,ಯಾದಗಿರಿ.